ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಸರ್ಕಾರಿ ಉನ್ನತ ಶಿಕ್ಷಣದ ಅವಕಾಶಗಳು

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) -

76 (89) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2015 ರಿಂದ 2020ನೇ ಸಾಲಿನ ಅವಧಿಯಲ್ಲಿ ರಾಜ್ಯದಲ್ಲಿ ಸರ್ಕಾರಿ ಶಾಲೆಗಳಿಂದ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ನೀಟ್ ಮೂಲಕ ವೈದ್ಯಕೀಯ, ಎಂಜಿನಿಯರಿಂಗ್, ದಂತ ಮುಂತಾದ ಪದವೀಧರ ಕೋರ್ಸ್‌ಗಳಿಗೆ ಬಂದ ಅರ್ಜಿಗಳ ಸಂಖ್ಯೆಯಲ್ಲಿ ಇಳಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) 2015-19ರ ಸಾಲಿನ ಅವಧಿಯಲ್ಲಿ ನೀಟ್ ಮೂಲಕ ವೈದ್ಯಕೀಯ ಕಾಲೇಜುಗಳಿಗೆ ಸೇರಿದ ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಇಳಿಕೆಯಾಗಿರುವುದು ನಿಜವೇ; (ವಿವರಗಳನ್ನು ಒದಗಿಸುವುದು)

(ಇ) ಬೋಧನಾ ಶುಲ್ಕವನ್ನು ಮರುಪಾವತಿ ಮಾಡದಿರುವ ಕಾರಣದಿಂದಾಗಿ ವಿಶೇಷವಾಗಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ವೈದ್ಯಕೀಯ ಮತ್ತು ಎಂಜಿನಿಯರಿಂಗ್‌ಗೆ ಸೇರ ಬಯಸುವ ವಿದ್ಯಾರ್ಥಿಗಳ ಪ್ರವೇಶದಲ್ಲಿ ತೀವ್ರ ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಈ) ಸರ್ಕಾರಿ ಶಾಲೆಗಳಲ್ಲಿ ಅಭ್ಯಸಿಸುವ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶಗಳನ್ನು ಸುಧಾರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)